# ಮುರುಘಾಮಠದಲ್ಲಿ ಸಾಮೂಹಿಕ ಕಲ್ಯಾಣ ಮಹೋತ್ಸವ

**ಚಿತ್ರದುರ್ಗ, ಜ. 5** – ಉಸಿರಾಟ ಜೀವಂತಿಕೆಯನ್ನು ತೋರಿಸುತ್ತದೆ. ಮಾನವ ಉಸಿರಾಟದ ಪ್ರಕ್ರಿಯೆಯಂತೆ ಧರ್ಮ, ಮೌಲ್ಯ, ಸಿದ್ಧಾಂತಗಳನ್ನು ಸದಾ ತನ್ನೊಳಗಿರಿಸಿಕೊಳ್ಳಬೇಕು. ಅಂಥ ವ್ಯಕ್ತಿ ನಡೆದಾಡುವ ದೇವಾಲಯವಾಗುತ್ತಾನೆ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ಅಭಿಪ್ರಾಯಿಸಿದರು.

ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಮತ್ತು ಎಸ್.ಜೆ.ಎಂ. ಶಾಂತಿ ಮತ್ತು ಪ್ರಗತಿ ಫೌಂಡೇಶನ್ ಸಹಯೋಗದಲ್ಲಿ ನಡೆದ ಮೂವತ್ತೊಂದನೇ ವರ್ಷದ ಒಂದನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶ್ರೀಗಳು, ಅಂತಃಸಾಕ್ಷಿ ಮತ್ತು ಅಂತಃಪ್ರಜ್ಞೆ ಜೊತೆಯಲ್ಲಿ ಸಾಗಬೇಕು. ಬದುಕಿನಲ್ಲಿ ಹೊಂದಾಣಿಕೆ ಮತ್ತು ಸಾಮರಸ್ಯ ಬೇಕು. ಸಂಸಾರದಲ್ಲಿ ಸ್ವಾರಸ್ಯ ಉಂಟಾಗಬೇಕು. ದೇಹದಲ್ಲಿ ರಕ್ತ ಹರಿಯಲೇಬೇಕು. ರಕ್ತದಾನ ಶ್ರೇಷ್ಠವಾದುದು. ಎಲ್ಲರು ರಕ್ತದಾನ ಮಾಡಿ ಇನ್ನೊಬ್ಬರ ಜೀವ ಉಳಿಸಬೇಕು ಎಂದರು.

ಹೃಷಿಕೇಶದ ದಯಾನಂದಾಶ್ರಮದ ಶ್ರೀ ಸಚ್ಚಿದಾನಂದ ಸರಸ್ವತಿ ಮಹಾಸ್ವಾಮಿಗಳು ಮಾತನಾಡಿ, ನಮ್ಮ ಸಿದ್ಧಾಂತವನ್ನು ನಾವು ಆಚರಿಸಬೇಕು. ಮಾತನಾಡುವುದು ಸುಲಭ, ಆದರೆ ಆಚರಣೆಗೆ ತರುವುದು ಕಷ್ಟ. ಮದುವೆ ಅಂದರೆ ಪರಸ್ಪರ ಅರ್ಥ ಮಾಡಿಕೊಳ್ಳುವುದಾಗಿದೆ ಎಂದು ತಿಳಿಸಿದರು.

ಮುಖ್ಯಅತಿಥಿ ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಿ.ಎಸ್. ಅರುಣ್ ಮಾತನಾಡಿ, ಭಾರತ ಸಾಂಸ್ಕøತಿಕ ಶ್ರೀಮಂತಿಕೆಯನ್ನು ಹೊಂದಿರುವ ರಾಷ್ಟ್ರ. ಹಾಗಾಗಿ ನಮ್ಮ ಸಂಸ್ಕøತಿಯನ್ನು ಇತರೆ ದೇಶಗಳು ಅನುಸರಿಸುತ್ತಿವೆ. ಆದರೆ ಇಂದು ನಮ್ಮೊಳಗೆ ಪರಸ್ಪರ ಅರಿತುಕೊಳ್ಳುವ ಮನೋಭಾವನೆಯೇ ಇಲ್ಲವಾಗಿದೆ. ಪ್ರತಿಷ್ಠೆಗಳನ್ನು ಬದಿಗೆ ಸರಿಸಿ ಮುಂದಿನ ಪೀಳಿಗೆಗೆ ಅವರ ಕರ್ತವ್ಯಗಳ ಕುರಿತು ಅರಿವು ಮೂಡಿಸಿ ಉತ್ತಮ ಸಂಸ್ಕಾರವನ್ನು ನೀಡುವ ಕಾರ್ಯ ಆಗಬೇಕು. ಸತಿ-ಪತಿಗಳ ಜೀವನದಲ್ಲಿ ಹೊಂದಾಣಿಕೆ ಮನೋಭಾವ ಪ್ರಮುಖವಾದುದು. ಭಾರತೀಯರು ಹೆಣ್ಣನ್ನು ತಾಯಿ, ಮಾತೆ ಸ್ವರೂಪದಲ್ಲಿ ಕಾಣುತ್ತಾರೆ.

ಆಧುನಿಕ ಕಲ್ಯಾಣ ಮಹೋತ್ಸವಗಳು ಅಸಹ್ಯ ಹುಟ್ಟಿಸುತ್ತವೆ. ಆದರೆ ಶ್ರೀಮಠದಲ್ಲಿ ನಡೆಯುತ್ತಿರುವ ಸಾಮೂಹಿಕ ಕಲ್ಯಾಣ ಮಹೋತ್ಸವವು ಯಾವುದೇ ಜಾತಿ, ಜನಾಂಗ, ವರ್ಗ ವರ್ಣರಹಿತವಾಗಿ ಹಿಂದುಳಿದ, ಬಡ ಹಾಗು ಮಧ್ಯಮವರ್ಗದ ಕುಟುಂಬಗಳಿಗೆ ವರದಾನವಾಗಿದೆ. ಶ್ರೀಮಠದಲ್ಲಿ ಸರಳ ವಿವಾಹವಾದವರು ಗಟ್ಟಿ ಬದುಕನ್ನು ಕಟ್ಟಿಕೊಳ್ಳಬೇಕು. ಭಾರತ ಇನ್ನು ಮುಂದೆ ವಿಶ್ವಗುರು ಮಟ್ಟಕ್ಕೆ ಹೋಗುತ್ತಿರುವುದು ಉತ್ತಮ ಬೆಳವಣಿಗೆ ಎಂದರು. ದೇವರಾಜ ಅರಸ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಆರ್. ರಘು ಮಾತನಾಡಿ, ಇದೊಂದು ಗಿನ್ನಿಸ್ ದಾಖಲೆಗೆ ಹೋಗುವ ಕಾರ್ಯಕ್ರಮ. ನಮಗೆ ಬೇಕಿರುವುದು ವೈಭವದ ಬದುಕಲ್ಲ ನೈಜ ಬದುಕು. ಆಚಾರ ವಿಚಾರಗಳನ್ನು ಪಾಲಿಸಬೇಕು. ನಾವು ನಮ್ಮನ್ನು ಮರೆಯುವ ಸಂದರ್ಭ ಬರಬಾರದು. ವಿದೇಶಿ ವಸ್ತುಗಳು ನಮ್ಮ ಮನೆಯನ್ನು ಆಕ್ರಮಿಸುತ್ತಿವೆ.

ನಮ್ಮ ವಸ್ತುಗಳು ನಮ್ಮ ಮನೆಯನ್ನು ಸೇರಬೇಕು. ಆ ಮೂಲಕ ಸ್ವದೇಶಿ ವಸ್ತುಗಳಿಗೆ ಹೆಚ್ಚಿನ ಮಾನ್ಯತೆ ಸಿಗಬೇಕಿದೆ. ನಮ್ಮ ಬಾಂಧವ್ಯಗಳು ಗಟ್ಟಿಯಾಗಬೇಕು. ನಮ್ಮ ಸಂಸ್ಕøತಿ ಮತ್ತೆ ಪ್ರತಿಷ್ಠಾಪಿಸಬೇಕಿದೆ. ಆದಷ್ಟು ಸರಳತೆಯ ಬದುಕು ನಮ್ಮದಾಗಬೇಕು ಎಂದು ಹೇಳಿದರು.

ಸತೀಶ್ ವಿ. ಮಾತನಾಡಿದರು. ಈ ಸಂದರ್ಭದಲ್ಲಿ 2ಜೋಡಿ ಅಂತರ್ಜಾತಿ ಸೇರಿದಂತೆ 17ಜೋಡಿಗಳು ವಿವಾಹವಾದರು. ಛಲವಾದಿ ಗುರುಪೀಠದ ಶ್ರೀ ಬಸವನಾಗಿದೇವ ಸ್ವಾಮಿಗಳು, ನಿಪ್ಪಾಣಿಯ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು, ಮಡಿವಾಳ ಮಾಚಿದೇವ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮಿಗಳು ಉಪಸ್ಥಿತರಿದ್ದರು.

ಸಾಮೂಹಿಕ ಕಲ್ಯಾಣ ಮಹೋತ್ಸವದ ಅಂಗವಾಗಿ ಸರ್ಕಾರಿ ಆಸ್ಪತ್ರೆ ವತಿಯಿಂದ ರಕ್ತದಾನ ಕಾರ್ಯಕ್ರಮ ನಡೆಯಿತು. ಜಮುರಾ ಕಲಾವಿದರು ಪ್ರಾರ್ಥಿಸಿದರು. ವೀರಭದ್ರಪ್ಪ ಸ್ವಾಗತಿಸಿದರು. ಜ್ಞಾನಮೂರ್ತಿ ನಿರೂಪಿಸಿದರು.








ಸಾಮೂಹಿಕ ಕಲ್ಯಾಣ ಮಹೋತ್ಸವ


ಸಾಮೂಹಿಕ ಕಲ್ಯಾಣ ಮಹೋತ್ಸವ